ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 238

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಕೆ.ಸಿ ಕೊಂಡಯ್ಯ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 13.09.2021

ಉತ್ತರಿಸುವ ಸಚಿವರು : ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ವಾರ್ಷಿಕ ವ್ಯರ್ಥವಾಗುತ್ತಿರುವ ಆಹಾರದ ಪ್ರಮಾಣವನ್ನು ಸರ್ಕಾರ ಅಂದಾಜಿಸಿದೆಯೇ; ಹಾಗಿದ್ದಲ್ಲಿ ಕಳೆದ 3 ವರ್ಷಗಳ ಮಾಹಿತಿ ನೀಡುವುದು.	ರಾಜ್ಯದಲ್ಲಿ ಸಾರ್ವಜನಿಕ ವಿತರಣಾ ಪದ್ಧತಿಯಲ್ಲಿ ಹಂಚಿಕೆ ಮಾಡುವ ಆಹಾರಧಾನ್ಯವನ್ನು ಪ್ರತಿ ಮಾಹೆ ಭಾರತೀಯ ಆಹಾರ ನಿಗಮದಿಂದ ಕೇಂದ್ರ ಸರ್ಕಾರದ ಹಂಚಿಕೆಯಂತೆ ಪಡೆಯಲಾಗುತ್ತಿದ್ದು, ದೀರ್ಘ ಅವಧಿಯಲ್ಲಿ ಯಾವುದೇ ಆಹಾರಧಾನ್ಯವನ್ನು ದಾಸ್ತಾನಿಡಲು ಅವಕಾಶವಿರುವುದಿಲ್ಲ. ಹಾಗಾಗಿ ರಾಜ್ಯದಲ್ಲಿ ಆಹಾರಧಾನ್ಯ ಪ್ರಮಾಣದಲ್ಲಿ ಯಾವುದೇ ವ್ಯರ್ಥವಾಗದಂತೆ ಪ್ರತಿ ಮಾಹೆ ಬಳಕೆ ಮಾಡಲಾಗುತ್ತಿದೆ.
(ಆ)	ಆಹಾರ ವ್ಯರ್ಥವಾಗದಂತೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಉದ್ಭವಿಸುವುದಿಲ್ಲ.

ಆನಾಸ 233 ಡಿಆರ್‌ಎ 2021 (ಇ-ಆಫೀಸ್)

(ಉಮೇಶ ವಿ.ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು